ಅಂಥವರು ಮತ್ತೊಮ್ಮೆ ಈಗ ಮೂರನೆ ಸಲ ಪುನರ್ ನಿವೇಶನಗೊಳ್ಳುವಂತಹ ವ್ಯವಸ್ಥೆ ನಿರ್ಮಾಣ ಆಗಿದೆ. ಆದ್ದರಿಂದ ನಾನು ಸರ್ಕಾರವನ್ನು ಒತ್ತಾಯ ಮಾಡುತ್ತೇನೆ. ಈ ಒಂದು ಪ್ರಾಜೆಕ್ಟನ್ನು ಪ್ರಾರಂಭ ಮಾಡಲು ಈ ಒಕ್ಕಲೆಬ್ಬಿಸುವ ಕಾರ್ಯಕ್ರಮ ಏನು ಮಾಡುತ್ತಿದ್ದಾರೆ. ಇದನ್ನು ಇನ್ನೂ ಒಂದು ಆರು ತಿಂಗಳು ಕಾಲ ಮುಂದೂಡಿ ಅಂದರೆ ಮಳೆಗಾಲ ಮುಗಿಯುವವರೆಗೆ ಅವರಿಗೆ ಕಾಲಾವಕಾಶವನ್ನು ಮಾಡಿ ಕೊಡಬೇಕೆಂದು ನಾನು ಮುಖ್ಯಮಂತ್ರಿಗಳಲ್ಲಿ ಒತ್ತಾಯ ಮಾಡುತ್ತೇನೆ.

ಶ್ರೀ ವಾಟಾಳ್‌ನಾಗರಾಜ್ : - ಶೂನ್ಯ ವೇಳೆಯಲ್ಲಿ ಒಂದಂಶವನ್ನು ತಮ್ಮ ಗಮನಕ್ಕೆ ತರುತ್ತಿದ್ದೇನೆ.

ಉಪಾಧ್ಯಕ್ಷರು : - ಶೂನ್ಯವೇಳೆ ಮುಗಿದು ಹೋಗಿದೆ. ದಯವಿಟ್ಟು ಕುಳಿತುಕೊಳ್ಳಿ.

ಚುನಾವಣಾ ಪ್ರಸ್ತಾವಗಳು

ಶ್ರೀ ಹಾರನಹಳ್ಳಿ ರಾಮಸ್ವಾಮಿ(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : - ಮಾನ್ಯ ಅಧ್ಯಕ್ಷರೇ, 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 21(1)(14)ನೇ ಕಲಂನ ಮೇರೆಗೆ, ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ, ಈ ಸಭೆಯು ಮೈಸೂರು ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಐದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಉಪಾಧ್ಯಕ್ಷರು : - ಪ್ರಸ್ತಾವನೆಯನ್ನು ಮಂಡಿಸಲಾಯಿತು.

ಶಾಸನ ರಚನೆ

1) 1993ನೇ ಸಾಲಿನ ಕರ್ನಾಟಕ ಮನರಂಜನಾ ತೆರಿಗೆ(ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ವೀರಪ್ಪಮೊಯ್ಲಿ(ಮುಖ್ಯಮಂತ್ರಿಗಳು) : - ಮಾನ್ಯ ಉಪಾಧ್ಯಕ್ಷರೇ, 1993ನೇ ಸಾಲಿನ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು : - ಪ್ರಸ್ತಾವ ಏನೆಂದರೆ, " 1993ನೇ ಸಾಲಿನ ಕರ್ನಾಟಕ ಮನರಂಜನಾ ತೆರಿಗೆ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ವೀರಪ್ಪಮೊಯ್ಲಿ(ಮುಖ್ಯಮಂತ್ರಿಗಳು) : - ಮಾನ್ಯ ಉಪಾಧ್ಯಕ್ಷರೇ, 1993ನೇ ಸಾಲಿನ ಕರ್ನಾಟಕ ಮನರಂಜನಾ ತೆರಿಗೆ(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು : - ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ I

2) ಕರ್ನಾಟಕ ಅಬಕಾರಿ(ತಿದ್ದುಪಡಿ)ವಿಧೇಯಕ 1993 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ವೀರಪ್ಪಮೊಯ್ಲಿ (ಮುಖ್ಯಮಂತ್ರಿಗಳು) : - ಮಾನ್ಯ ಉಪಾಧ್ಯಕ್ಷರೇ, 1993ನೇ ಸಾಲಿನ ಕರ್ನಾಟಕ ಅಬಕಾರಿ(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು : - ಪ್ರಸ್ತಾವ ಏನೆಂದರೆ, "1993ನೇ ಸಾಲಿನ ಕರ್ನಾಟಕ ಅಬಕಾರಿ (ತಿದ್ದುಪಡಿ)